**<u>ಕರ್ನಾಟಕ ವಿಧಾನ ಪರಿಷತ್ತಿನ ಮಾನ್ಯ ಸದಸ್ಯರಾದ ಶ್ರೀ ಪ್ರಕಾಶ ಕೆ.ರಾಥೋಡ, ಇವರ ನಿಯಮ 72ರಡಿಯಲ್ಲಿ ನೀಡಿರುವ ಸೂಚನೆಗೆ ಹೇಳಿಕೆ</u>**

**<u>ಸೂಚನೆ</u>**

ರಾಜ್ಯದಲ್ಲಿರುವ ಹಲವಾರು ಇಲಾಖೆಗಳಲ್ಲಿ ಕೆ.ಎ.ಎಸ್. (ಕಿರಿಯ ಶ್ರೇಣಿ) ವೃಂದದ ನೇರ ನೇಮಕಾತಿ ಕೋಟಾದಡಿ 40 ಹುದ್ದೆಗಳು ಸೇರಿದಂತೆ ರಾಜ್ಯ ಸರ್ಕಾರದ ನಾನಾ ಇಲಾಖೆಗಳಲ್ಲಿ ಗೆಜೆಟೆಡ್ ಪ್ರೊಬೇಷನರಿ 500ಕ್ಕೂ ಹೆಚ್ಚು ಹುದ್ದೆಗಳು ಖಾಲಿ ಇದೆ. ಈ ರೀತಿ ಖಾಲಿ ಇರುವ ಈ ಹುದ್ದೆಗಳು ಪ್ರಮುಖವಾಗಿ ಕಂದಾಯ, ಗ್ರಾಮೀಣಾಭಿವೃದ್ಧಿ, ಗೃಹ, ಆಹಾರ, ಹಿಂದುಳಿದ ವರ್ಗ, ಸಮಾಜ ಕಲ್ಯಾಣ, ನಗರಾಭಿವೃದ್ಧಿ, ಸಹಕಾರ, ಬಂದಿಖಾನೆ, ಪ್ರವಾಸೋದ್ಯಮ, ಕೌಶಲಾಭಿವೃದ್ಧಿ ಮತ್ತು ಉದ್ಯಮಶೀಲತೆ ಇಲಾಖೆಗಳಿಗೆ ಸೇರಿದವಾಗಿರುತ್ತದೆ. ಈ ಖಾಲಿ ಇರುವ ಹುದ್ದೆಗಳಿಂದ ಸರ್ಕಾರದ ಯೋಜನೆಯನ್ನು ಜನರಿಗೆ ತಲುಪಿಸಲು ಸಾಧ್ಯವಾಗದೇ ಅನೇಕ ಅಭಿವೃದ್ಧಿ ಕಾರ್ಯಗಳು ಕುಂಠಿತಗೊಂಡಿರುತ್ತದೆ. ರಾಜ್ಯವು ಸಮತೋಲಿತ ಪ್ರಾದೇಶಿಕ ಅಭಿವೃದ್ಧಿಯನ್ನು ಸಾಧಿಸಲು ಕೇಂದ್ರೀಕೃತ ಮತ್ತು ಸಮಗ್ರ ಕ್ರಮಗಳನ್ನು ಕೈಗೊಳ್ಳಲು ವಿಫಲವಾಗುತ್ತಿದೆ.

ಕಳೆದ 10 ವರ್ಷಗಳಿಂದ ಕೇವಲ ನಾಲ್ಕು ಬಾರಿ ಈ ಗೆಜೆಟೆಡ್ ಪ್ರೊಬೇಷನರಿ ಹುದ್ದೆಗಳಿಗೆ ಆಹ್ವಾನಿಸಿದರೆಯಾದರೂ ಈ ಹುದ್ದೆಗಳಿಗೆ ಆಯ್ಕೆಯಾದವರಲ್ಲಿ 180ಕ್ಕೂ ಹೆಚ್ಚು ಅಭ್ಯರ್ಥಿಗಳು ಹುದ್ದೆಗೆ ಸೇರಿಲ್ಲವಾದ್ದರಿಂದ ಈ ಹುದ್ದೆಗಳನ್ನು ಸಹಾ ಖಾಲಿ ಹುದ್ದೆಗಳೆಂದು ಪರಿಗಣಿಸಿ, ಇನ್ನೂಳಿದಂತೆ ಒಟ್ಟು 500 ಹುದ್ದೆಗಳ ಭರ್ತಿಗೆ ಸರ್ಕಾರವು ಸೂಕ್ತ ಕ್ರಮವನ್ನು ವಹಿಸಲು ಮತ್ತು ಪ್ರಸ್ತುತ ಈಗಾಗಲೇ ಕೇವಲ 43 ಹುದ್ದೆಗಳ ನೇಮಕಾತಿಗಾಗಿ ಸಲ್ಲಿಸಿರುವ ಪ್ರಸ್ತಾವನೆಯನ್ನು ತಡೆಹಿಡಿಯುವ ಸಲುವಾಗಿ ಈ ಸದನದ ಮೂಲಕ ಸರ್ಕಾರವನ್ನು ಒತ್ತಾಯಿಸಲು ನಿಯಮ 72 ರ ಅಡಿಯಲ್ಲಿ ದಿನಾಂಕ: 22/12/2022 ರಂದು ಸರ್ಕಾರದ ಗಮನಸೆಳೆಯ ಬಯಸುತ್ತೇನೆ

****

**<u>ಹೇಳಿಕೆ</u>**

ಕರ್ನಾಟಕ ಗೆಜೆಟೆಡ್ ಪ್ರೊಬೇಷನರ್ಸ್ (ಸ್ಪರ್ಧಾತ್ಮಕ ಪರೀಕ್ಷೆಗಳ ಮೂಲಕ ನೇಮಕ) ನಿಯಮಗಳು, 1997 ರನ್ವಯ ಗೆಜೆಟೆಡ್ ಪ್ರೊಬೇಷನರ್ಸ್ ಹುದ್ದೆಗಳ ನೇಮಕಾತಿಗಾಗಿ ರಿಕ್ತ ಸ್ಥಾನಗಳ ವಿವರವನ್ನು ನೀಡುವಂತೆ ಸಂಬಂಧಪಟ್ಟ ಆಡಳಿತ ಇಲಾಖೆಗಳನ್ನು ಕೋರಲಾಗಿತ್ತು. ಅದರಂತೆ ಆಡಳಿತ ಇಲಾಖೆಗಳು ರಿಕ್ತ ಸ್ಥಾನಗಳ ಭರ್ತಿಗಾಗಿ ಆರ್ಥಿಕ ಇಲಾಖೆಯ ಅನುಮೋದನೆ ಪಡೆದು ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಗೆ ಒಟ್ಟು 43 ಗ್ರೂಪ್-ಎ ಮತ್ತು ಗ್ರೂಪ್-ಬಿ ಹುದ್ದೆಗಳಿಗೆ ಆಯ್ಕೆ ಮಾಡಲು ಪ್ರಸ್ತಾವನೆಯನ್ನು ಸಲ್ಲಿಸಿರುತ್ತವೆ. ಅದರಂತೆ ಖಾಲಿ ಇರುವ ಒಟ್ಟು 43 ಗ್ರೂಪ್-ಎ ಮತ್ತು ಗ್ರೂಪ್-ಬಿ ಹುದ್ದೆಗಳಿಗೆ ಆಯ್ಕೆ ಮಾಡಲು ನೇಮಕಾತಿ ಪ್ರಕ್ರಿಯೆ ನಡೆಸುವಂತೆ ದಿನಾಂಕ 04.11.2022 ರಂದು ಆಯ್ಕೆ ಪ್ರಾಧಿಕಾರವಾದ ಕರ್ನಾಟಕ ಲೋಕಸೇವಾ ಆಯೋಗವನ್ನು ಕೋರಲಾಗಿತ್ತು.

ಮುಂದುವರೆದು, ಕರ್ನಾಟಕ ಅನುಸೂಚಿತ ಜಾತಿಗಳು ಮತ್ತು ಅನುಸೂಚಿತ ಪಂಗಡಗಳು (ಶೈಕ್ಷಣಿಕ ಸಂಸ್ಥೆಗಳಲ್ಲಿನ ಸ್ಥಾನಗಳಲ್ಲಿ ಮತ್ತು ರಾಜ್ಯಾಧೀನ ಸೇವೆಗಳಲ್ಲಿನ ನೇಮಕಾತಿ ಅಥವಾ ಹುದ್ದೆಗಳಲ್ಲಿ ಮೀಸಲಾತಿ) ಅಧ್ಯಾದೇಶ, 2022ರ ಅಧಿಸೂಚನೆ ಸಂಖ್ಯೆ: ಸಂವ್ಯಶಾಇ 29 ಶಾಸನ 2022, ದಿನಾಂಕ: 23.10.2022ರನ್ವಯ ಹುದ್ದೆಗಳ ವರ್ಗೀಕರಣವನ್ನು ಪರಿಷ್ಕರಿಸುವ ಪ್ರಸ್ತಾವನೆ ಪರಿಶೀಲನೆಯಲ್ಲಿದೆ.

ಸಂಖ್ಯೆ: ಸಿಆಸುಇ 201 ಎಸ್‌ಎಸ್‌ಸಿ 2022

(ಬಸವರಾಜ ಬೊಮ್ಮಾಯಿ)
ಮುಖ್ಯಮಂತ್ರಿ



Generated from eOffice by G JAGADEESHA, CMO-JS(GJ), JOINT SECREATRY, CMO on 21/12/2022 03:55 PM